**ದಿನಾಂಕಃ 17.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ಡಿಸ್ಚಾರ್ಜ್ ಸಮರಿಗಳನ್ನು ಒಟ್ಟಾಗಿ **ನಿಪಿ 9** ಎಂದು, ಕಾಲೇಜಿನವರ ನೀಡಿರುವ ಧೃಡಿಕರಣ ಪತ್ರವನ್ನು **ನಿಪಿ 10** ಎಂದು, ಮೆಡಿಕಲ್ ಬಿಲ್ಲನ್ನು **ನಿಪಿ 11** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಎದುದಾರರ ಪರ ಮಾನ್ಯ ವಕೀಲರಿಂದ.**

ಅಪಘಾತ ದಿನಾಂಕ 08.10.2024ರ ಬೆಳಿಗ್ಗೆ 7.20 ಗಂಟೆಯ ಸಮಯದಲ್ಲಿ ಲಿಂಗರಾಜಪುರ ಮುಖ್ಯ ರಸ್ತೆಯಲ್ಲಿ ಸಂಭವಿಸಿರುತ್ತದೆ. ಆ ದಿನ ನಾನು ಭೈರತಿ ಬಂಡೆಯಿಂದ ಕಾಲೇಜಿಗೆ ಹೋಗುತ್ತಿದ್ದೆನು. ಪ್ರಸ್ತುತ ನಾನು 2ನೇ ವರ್ಷದ ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದೇನೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿರುತ್ತೇನೆ. ಆ ದಿನ ನಾನು ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ಬಗ್ಗೆ ಟಿಕೇಟ್ ಅನ್ನು ಹಾಜರುಪಡಿಸಿಲ್ಲ. ಆ ದಿನ ನಾನು ಹೋಗುತ್ತಿದ್ದ ಬಸ್ಸಿನ ಸಂಖ್ಯೆ ಕೆಎ-57-ಎಫ್-0736 ಆಗಿರುತ್ತದೆ.

ಅಪಘಾತವಾದ ನಂತರ ನಾನು ಸಕ್ರಾ ಆಸ್ಪತ್ರೆಗೆ ಹೋಗಿರುತ್ತೇನೆ. ಸದರಿ ಆಸ್ಪತ್ರೆಯಲ್ಲಿ ದಿನಾಂಕ 08.10.2024 ರಿಂದ ದಿಃ 11.10.2024ರ ವರೆಗೆ ಅಂದರೆ 4 ದಿನಗಳ ಕಾಲ ದಾಖಲಾಗಿ ಚಿಕಿತ್ಸೆ ಪಡೆದಿದ್ದೇನೆ. ನಿಪಿ 11 ಅನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಸಣ್ಣಪುಟ್ಟ ಗಾಯಗಳು ಆಗಿದ್ದು, ಅವು ಈಗ ವಾಸಿಯಾಗಿರುತ್ತವೆ ಎಂದರೆ ಸರಿಯಲ್ಲ. ನಾನು ಈಗಲೂ ಮೊದಲಿನಂತೆ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ.

ಅಪಘಾತದಲ್ಲಿ ಬಲಗೈ ಮೂಳೆ ಮುರಿತ ಮತ್ತು ತೆರಚಿದ ಗಾಯಗಳು ಆಗಿರುತ್ತವೆ. ಈಗ ನನ್ನ ಬಲಗೈ ಮೂಲಕ ಕೆಲಸಗಳನ್ನು ಮಾಡಲು ಆಗುತ್ತದೆ ಎಂದರೆ ಸರಿಯಲ್ಲ. ಬಸ್ಸಿನ ಚಾಲಕನ

ತಪ್ಪಿ ನಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ನಾನು ಬಸ್ಸು ನಿಲುಗಡೆ ಮಾಡುವುದನ್ನು ಕಾಯದೇ ಆತುರದಿಂದ ಇಳಿಯುವ ಪ್ರಯತ್ನ ಮಾಡಿದ ಕಾರಣ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ನನ್ನ ತಪ್ಪಿನಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಪೊಲೀಸರೊಂದಿಗೆ ಶಾಮೀಲಾಗಿ ಸೃಷ್ಟಿತ ದಾಖಲಾತಿಗಳನ್ನು ಹಾಜರುಪಡಿಸಿ, ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**